ಸಚಿವರು):-

ಅ) ಶ್ರೀ ಕಂಠೀರವ ಕ್ರೀಡಾಂಗಣ ಸಂಕೀರ್ಣದಲ್ಲಿ 4ನೇ ರಾಷ್ಟ್ರೀಯ ಕ್ರೀಡೆಗಳಿಗಾಗಿ ಕ್ರೀಡಾಂಗಣವನ್ನು ಅಭಿವೃದ್ಧಿಪಡಿಸುತ್ತಿದ್ದು ಹಾಗೂ 4000 ಜನ. ಸಾಮರ್ಥ್ಯವುಳ್ಳ ಒಂದು ಒಳಾಂಗಣ ಕ್ರೀಡಾಂಗಣವನ್ನು ನಿರ್ಮಿಸಲಾಗುತ್ತಿದೆ.

ಆ) ಶ್ರೀ ಕಂಠೀರವ ಹೊರಾಂಗಣ ಕ್ರೀಡಾಂಗಣಕ್ಕಾಗಿ ರೂ.9.95 ಕೋಟಿಗಳನ್ನು ಖರ್ಚು ಮಾಡಲಾಗಿದೆ. ಕಂಠೀರವ ಕ್ರೀಡಾಂಗಣ ಸಮುಚ್ಛಯದಲ್ಲಿ ಒಂದು ಒಳಾಂಗಣ ಕ್ರೀಡಾಂಗಣ ಕಟ್ಟಿಸಲು ರೂ.762.00 ಲಕ್ಷಗಳನ್ನು ಖರ್ಚು ಮಾಡಲಾಗಿದೆ. ರಾಷ್ಟ್ರೀಯ ಕ್ರೀಡೆಗಳಿಗಾಗಿ ರಾಜ್ಯ ಸರ್ಕಾರವು ಈವರೆಗೆ ರೂ. 13.85 ಕೋಟಿಗಳನ್ನು ಬಿಡುಗಡೆ ಮಾಡಿರುತ್ತದೆ. ಕೇಂದ್ರ ಸರ್ಕಾರದಿಂದ ಅನುದಾನ ಬಂದಿರುವುದಿಲ್ಲ.

ಇ) ಶೇಕಡ 60ರಷ್ಟು ಪೂರ್ಣಗೊಳಿಸಲಾಗಿದೆ.

ಈ) 1996ರ ಅಕ್ಟೋಬರ್ ಅಂತ್ಯದೊಳಗೆ ಪೂರ್ಣಗೊಳಿಸುವ ನಿರೀಕ್ಷೆ ಇದೆ.

ವಿಷಯ:- ಉಡುಪಿ ನ್ಯಾಯಾಲಯಗಳ ಪೀಠೋಪಕರಣಗಳ ದುರಸ್ತಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 627 (1466)

ಶ್ರೀ ಯು.ಆರ್.ಸಭಾಪತಿ (ಉಡುಪಿ):- ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ನ್ಯಾಯಾಲಯಗಳ ಪೀಠೋಪಕರಣಗಳ ದುರಸ್ತಿ ಕಾರ್ಯ ಎಷ್ಟು ವರ್ಷದಿಂದ ನಡೆಯದೆ ಬಾಕಿ ಇರುವುದು, ಹಾಗಿದ್ದಲ್ಲಿ ಈ ದುರಸ್ತಿ ಕಾರ್ಯವನ್ನು ಯಾವಾಗ ಮಾಡಲಾಗುವುದು?

ಆ) ಹೊಸ ಪೀಠೋಪಕರಣಗಳ ಸರಬರಾಜಿಗಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ. ಬಿಡುಗಡೆ ಮಾಡಿಲ್ಲದಿದ್ದಲ್ಲಿ ಯಾವಾಗ ಮಾಡಲಾಗುವುದು (ವಿವರ ನೀಡುವುದು)?

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು):-

ಅ) ದುರಸ್ತಿ ಕಾರ್ಯ ನಡೆದಿರುವುದಿಲ್ಲ. ದುರಸ್ತಿ ಕಾರ್ಯವನ್ನು ಆದಷ್ಟು ಜಾಗ್ರತೆ ಕೈಗೊಳ್ಳಲಾಗುವುದು.

ಆ) ಬಿಡುಗಡೆ ಮಾಡಿರುವುದಿಲ್ಲ. ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ : ಕರ್ನಾಟಕ ಉಚ್ಚ ನ್ಯಾಯಾಲಯದ ಪ್ರಸ್ತಾವನೆ ಈ ವರ್ಷ ಬಂದಲ್ಲಿ, ಹಣದ ಪರಿಸ್ಥಿತಿ ಮತ್ತು

ರಾಜ್ಯದ ಇತರ ನ್ಯಾಯಾಲಯಗಳ ಒಟ್ಟಾರೆ ಬೇಡಿಕೆ ಪರಿಶೀಲಿಸಿ, ಬಿಡುಗಡೆ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತದೆ.

ವಿಷಯ:- ರಾಜ್ಯದಲ್ಲಿ ಒಂದೇ ಸ್ಥಳದಲ್ಲಿ 15 ವರ್ಷಗಳ ಮೇಲ್ಪಟ್ಟು ಕೆಲಸ ಮಾಡುತ್ತಿರುವ ಸಹಾಯಕ ಯುವಜನ ಸೇವಾ ಮತ್ತು ಕ್ರೀಡಾಧಿಕಾರಿಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 628 (973)

ಶ್ರೀ ಯು.ಆರ್.ಸಭಾಪತಿ (ಉಡುಪಿ):- ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಒಂದೇ ಸ್ಥಳದಲ್ಲಿ 15 ವರ್ಷಗಳಿಂದಲೂ ಮೇಲ್ಪಟ್ಟು ಎಷ್ಟು ಜನ ಸಹಾಯಕ ಯುವಜನ ಸೇವಾ ಮತ್ತು ಕ್ರೀಡಾಧಿಕಾರಿಗಳು ಕ್ರೀಡಾ ಇಲಾಖೆಯಲ್ಲಿ ಇದ್ದಾರೆ?

ಆ) ಇಷ್ಟು ಜನರು ಒಂದೇ ಕಡೆಯಲ್ಲಿ ಕೆಲಸ ಮಾಡಲು ಕಾರಣವೇನು?

ಶ್ರೀ ಅಜಯಕುಮಾರ್ ಸರ್‌ನಾಯಕ್ (ಯುವಜನ ಸೇವಾ ಹಾಗೂ ಕ್ರೀಡಾ ಸಚಿವರು):-

ಅ) 15 ವರ್ಷಕ್ಕಿಂತ ಮೇಲ್ಪಟ್ಟು ಒಂದೇ ಸ್ಥಳದಲ್ಲಿ ಯಾರೂ ಕೆಲಸ ನಿರ್ವಹಿಸುತ್ತಿಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ:- 1996-97ರಲ್ಲಿ ಹೊಸದಾಗಿ ಪ್ರಾರಂಭಿಸಿದ ಗ್ರಾಮೀಣ ಪಶು ಚಿಕಿತ್ಸಾ ಕೇಂದ್ರಗಳ ಸಂಖ್ಯೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 630 (704)

ಶ್ರೀ ವಿಶ್ವೇಶ್ವರ ಹೆಗಡೆ (ಅಂಕೋಲ):- ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1996-97ರಲ್ಲಿ ಹೊಸದಾಗಿ ಪ್ರಾರಂಭಿಸಿದ ಗ್ರಾಮೀಣ ಪಶು ಚಿಕಿತ್ಸಾ ಕೇಂದ್ರಗಳು ಎಷ್ಟು. ಈ ವರ್ಷ ಮೇಲ್ದರ್ಜೆಗೆ ಏರಿಸಲ್ಪಟ್ಟ ಆಸ್ಪತ್ರೆಗಳ ಸಂಖ್ಯೆ ಎಷ್ಟು, (ವಿವರಗಳನ್ನು ಒದಗಿಸುವುದು).

ಆ) ರಾಜ್ಯದಲ್ಲಿ ಖಾಲಿ ಇರುವ ಪಶು ವೈದ್ಯರ ಹುದ್ದೆಗಳ ಸಂಖ್ಯೆ ಎಷ್ಟು, ಉತ್ತರ ಕನ್ನಡ ಜಿಲ್ಲೆಯಲ್ಲಿಯ ಖಾಲಿ ಇರುವ ವೈದ್ಯರ ಸ್ಥಳಗಳು ಯಾವುವು?

ಶ್ರೀ ಬಿ.ಬಿ.ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು):-

ಅ) ಯಾವುದೂ ಇಲ್ಲ.